**Akashvani : Bangalore**
**Regional Bulletin In Kannada**
**04.08.2025 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**04.08.2025 / 18.40 hrs**

**<><*<><>*><>**

## ಮುಖ್ಯಾಂಶಗಳು

**೧. ಸಾರಿಗೆ ನೌಕರರ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಒಂದು ದಿನದ ಮಟ್ಟಿಗೆ ಹೈಕೋರ್ಟ್ ತಡೆ**

**೨. ಸಾರಿಗೆ ನೌಕರರ ಎಲ್ಲಾ ಅಹವಾಲುಗಳನ್ನು ಮಾತುಕತೆ ಮೂಲಕ ಬಗೆಹರಿಸಲು ಸರ್ಕಾರ ಸಿದ್ಧ- ಮುಖ್ಯಮಂತ್ರಿ**

**೩. ಶಿಬು ಸೊರೇನ್ ನಿಧನ ಹಿನ್ನೆಲೆ; ಬೆಂಗಳೂರಿನಲ್ಲಿ ನಡೆಯಬೇಕಿದ್ದ ರಾಹುಲ್ ಗಾಂಧಿ ನೇತೃತ್ವದ ಪ್ರತಿಭಟನೆ ಇದೇ ೮ ಕ್ಕೆ ಮುಂದೂಡಿಕೆ**

**೪. ಮಾವುತರು, ಕಾವಾಡಿ ಹಾಗೂ ಅರಣ್ಯ ಸಿಬ್ಬಂದಿಗೆ ಅರ್ಜುನ ಆನೆ ಹೆಸರಿನಲ್ಲಿ ಪ್ರಶಸ್ತಿ**

**<><*<><>*><>**

ವೇತನ ಪರಿಷ್ಕರಣೆ ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಾಳೆಯಿಂದ ರಾಜ್ಯಾದ್ಯಾಂತ ಸಾರಿಗೆ ನೌಕರರು ಕರೆ ಕೊಟ್ಟಿದ್ದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ನಾಳೆ ಒಂದು ದಿನದ ಮಟ್ಟಿಗೆ ಮುಷ್ಕರ ನಡೆಸದಂತೆ ಕರ್ನಾಟಕ ಹೈಕೋರ್ಟ್ ಸಾರಿಗೆ ನೌಕರರಿಗೆ ಆದೇಶಿಸಿದೆ. ನಾಳಿನ ಮುಷ್ಕರ ಸಂಬಂಧ ಹೈಕೋರ್ಟ್ ನಲ್ಲಿ ಪಿಐಎಲ್ ಹಾಕಲಾಗಿತ್ತು. ಇಂದು ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ನಾಳೆ ಮುಷ್ಕರ ನಡೆಸದಂತೆ ಆದೇಶಿಸಿದ್ದು, ವಿಚಾರಣೆಯನ್ನು ನಾಳೆಗೆ ಮುಂದೂಡಿದೆ. ಮುಷ್ಕರ ನಡೆದರೆ ಜನಸಾಮಾನ್ಯರಿಗೆ ತೊಂದರೆಯಾಗುತ್ತದೆ ಎಂದು ಹೇಳಿರುವ ಹೈಕೋರ್ಟ್ ಸರ್ಕಾರ, ಸಾರಿಗೆ ನಿಗಮಗಳಿಗೆ ನೋಟಿಸ್ ನೀಡಿದೆ.

**<><*<><>*><>**

ಸಾರಿಗೆ ನೌಕರರ ಸಂಘದ ಚುನಾವಣೆ ನಡೆಸುವ ಕುರಿತು ಪರಿಶೀಲನೆ ನಡೆಸಲಾಗುವುದು. ಎಲ್ಲಾ ಅಹವಾಲುಗಳನ್ನು ಮಾತುಕತೆ ಮೂಲಕ ಬಗೆಹರಿಸಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅವರು ಇಂದು ವಿಧಾನಸೌಧ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ವಿವಿಧ ಕಾರ್ಮಿಕ ಸಂಘಟನೆಗಳೊಂದಿಗೆ ಸಭೆ ನಡೆಸಿದ ನಂತರ ಮಾತನಾಡಿ, ವೇತನ ಪರಿಷ್ಕರಣೆ ಕುರಿತಾಗಿ ಶ್ರೀನಿವಾಸ ಮೂರ್ತಿ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯ ಶಿಫಾರಸು ಆಧಾರದಲ್ಲಿ ೨೦೨೩ರಿಂದ ಜಾರಿಗೆ ಬರುವಂತೆ ಅಂದಿನ ಸರ್ಕಾರ ಅಧಿಸೂಚನೆ ಸಹ ಹೊರಡಿಸಿತ್ತು. ಆದರೆ ಈಗ ೩೮ ತಿಂಗಳ ಬಾಕಿ ವೇತನ ಪಾವತಿಗೆ ಬೇಡಿಕೆ ಇರಿಸಿರುವುದು ಸಮಂಜಸವಲ್ಲ ಎಂದು ಹೇಳಿದರು. ಸಾರಿಗೆ ನಿಗಮದ ವಿವಿಧ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ಈಗಾಗಲೇ ಕೆಲವು ಸುತ್ತಿನ ಸಭೆ ನಡೆಸಲಾಗಿದೆ. ಪರಸ್ಪರ ಮಾತುಕತೆ ಮೂಲಕ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಿದೆ. ನಾಳೆ ಕರೆ ನೀಡಿರುವ ಚಳವಳಿಯನ್ನು ವಾಪಾಸು ಪಡೆಯುವಂತೆ ಮುಖ್ಯಮಂತ್ರಿ ಅವರು ಮನವಿ ಮಾಡಿದರು. ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೆಎಸ್ಆರ್‌ಟಿಸಿ ಅಧ್ಯಕ್ಷ ಎಸ್.ಆರ್ ಶ್ರೀನಿವಾಸ್, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಅಧ್ಯಕ್ಷ ರಾಜುಕಾಗೆ, ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

**<><*<><>*><>**

ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಶಿಬು ಸೊರೇನ್ ಅವರ ನಿಧನಕ್ಕೆ ಮೂರು ದಿನಗಳ ಶೋಕಾಚರಣೆ ಹಿನ್ನೆಲೆಯಲ್ಲಿ ಮತಗಳ್ಳತನ ವಿರುದ್ಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆಯಬೇಕಿದ್ದ ಲೋಕಸಭೆ ವಿರೋಧ ಪಕ್ಷದ ನಾಯಕ

ರಾಹುಲ್ ಗಾಂಧಿ ಅವರ ನೇತೃತ್ವದ ಪ್ರತಿಭಟನಾ ಸಭೆಯನ್ನು ಇದೇ ೮ಕ್ಕೆ ಮುಂದೂಡಲಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ. ಸ್ವಾತಂತ್ರ್ಯಉದ್ಯಾನದಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಇಂದು ಮಾತನಾಡಿದ ಅವರು, ಶಿಬು ಸೊರೇನ್ ಬುಡಕಟ್ಟು ಸಮುದಾಯದ ಹಿರಿಯ ನಾಯಕರು. ಕಾಂಗ್ರೆಸ್ ಪಕ್ಷದ ಬಹುಕಾಲದ ಮೈತ್ರಿ ನಾಯಕರು. ಅವರಿಗೆ ಗೌರವ ಸಲ್ಲಿಸುವುದು ನಮ್ಮ ಕರ್ತವ್ಯ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರು ಶಿಬು ಸೊರೇನ್ ಅವರಿಗೆ ಗೌರವ ಸಲ್ಲಿಸಬೇಕು. ಅವರ ಅಂತ್ಯಕ್ರಿಯೆ ನಾಳೆ ಮಧ್ಯಾಹ್ನ ೩ ಗಂಟೆಗೆ ನಡೆಯಲಿರುವ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ಆತುರದಲ್ಲಿ ಮಾಡುವುದು ಬೇಡ ಎಂಬ ಕಾರಣಕ್ಕೆ ಈ ತೀರ್ಮಾನಕ್ಕೆ ಬರಲಾಗಿದೆ. ಶೋಕಾಚರಣೆ ಆಚರಿಸುವ ದಿನ ದೇಶಕ್ಕೆ ಒಂದು ಸಂದೇಶ ನೀಡುವ ಕಾರ್ಯಕ್ರಮ ಬೇಡ ಎಂದು ನಿರ್ಧರಿಸಲಾಗಿದೆ. ಈ ವಿಚಾರವಾಗಿ ನಾಯಕರ ಜೊತೆ ಚರ್ಚಿಸಿ ಈ ತೀರ್ಮಾನ ಕೈಗೊಳ್ಳಲಾಗಿದೆ" ಎಂದು ಅವರು ತಿಳಿಸಿದರು.

**<><*<><>*><>**

ಆನೆ ಸೆರೆ ಕಾರ್ಯಾಚರಣೆ, ಆನೆಗಳನ್ನು ಪಳಗಿಸುವುದು ಮತ್ತು ಯಶಸ್ವಿಯಾಗಿ ವನ್ಯಜೀವಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಉತ್ತಮ ಕಾರ್ಯ ಮಾಡಿದ ಮಾವುತರು, ಕಾವಾಡಿ ಹಾಗೂ ಅರಣ್ಯ ಸಿಬ್ಬಂದಿಗೆ ಇನ್ನು ಮುಂದೆ ಅರ್ಜುನ ಆನೆ ಹೆಸರಿನಲ್ಲಿ ಪ್ರಶಸ್ತಿ ನೀಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಅವರು ಹುಣಸೂರು ತಾಲೂಕು ವೀರನಹೊಸಹಳ್ಳಿಯಲ್ಲಿಂದು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ೧೪ ಆನೆಗಳ ಪೈಕಿ ೯ ಆನೆಗಳ ಮೊದಲ ತಂಡಕ್ಕೆ ಸಾಂಪ್ರದಾಯಿಕವಾಗಿ ಪೂಜೆ ನೆರವೇರಿಸಿ, ಕಬ್ಬು, ಅಕ್ಕಿ, ಬೆಲ್ಲ ತಿನ್ನಿಸಿ ಗಜಪಯಣಕ್ಕೆ ಚಾಲನೆ ನೀಡಿ ಮೊದಲ ಸಾಲಿನ ಅರ್ಜುನ ಆನೆ ಹೆಸರಿನ ಪ್ರಶಸ್ತಿಯನ್ನು ಭೀಮ ಆನೆಯ ಮಾವುತ ಹಾಗೂ ಕಾಪಾಡಿಗಳಾದ ಗುಂಡ ಮತ್ತು ನಂಜುಂಡಸ್ವಾಮಿಯವರಿಗೆ ಪ್ರದಾನ ಮಾಡಿದರು. ನಂತರ ಮಾತನಾಡಿದ ಅವರು, ಪ್ರಕೃತಿ ಪರಿಸರದ ಸಮತೋಲನಕ್ಕೆ ವನ್ಯಜೀವಿಗಳು ಅತ್ಯವಶ್ಯಕವಾಗಿದ್ದು, ಅವುಗಳ ರಕ್ಷಣೆಗೆ ನಾವೆಲ್ಲರೂ ಕಟಿಬದ್ಧರಾಗಬೇಕು ಎಂದು ಅವರು ಹೇಳಿದರು. ಸಫಾರಿಯಲ್ಲಿ ವನ್ಯಜೀವಿಗಳನ್ನು, ದಸರಾ ಜಂಬೂಸವಾರಿಯಲ್ಲಿ ಅಲಂಕೃತ ಆನೆಗಳನ್ನು ನೋಡಿ ಆನಂದಿಸುವ ನಾವು ಅವುಗಳ ಸಂರಕ್ಷಣೆಗೂ ಮುಂದಾಗಬೇಕು ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್ ಪುರ ತಾಲೂಕಿನ ಮಡಬೂರು ಗ್ರಾಮದ ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಕಾರ್ಯಾಚರಣೆ ನಡೆಸಿ ಕಾಡಾನೆಯೊಂದನ್ನು ಸೆರೆ ಹಿಡಿಯಲಾಗಿದೆ. ಎನ್.ಆರ್.ಪುರದಲ್ಲಿ ಕಳೆದ ವಾರ ಕಾಡಾನೆ ದಾಳಿಗೆ ಇಬ್ಬರು ವ್ಯಕ್ತಿಗಳು ಮೃತಪಟ್ಟಿದ್ದರು. ಇದರಿಂದಾಗಿ ಸರ್ಕಾರದ ಆದೇಶದ ಮೇರೆಗೆ ಕಾಡಾನೆಗಳನ್ನು ಹಿಡಿದು ಸೆರೆ ಹಿಡಿದು ಸ್ಥಳಾಂತರಿಸುವ ಕಾರ್ಯಾಚರಣೆ ಆರಂಭಿಸಲಾಗಿತ್ತು. ಕಳೆದ ೪ ದಿನಗಳ ಹಿಂದೆ ಒಂದು ಕಾಡಾನೆ ಹಾಗು ಇಂದು ಒಂದು ಕಾಡಾನೆ ಒಟ್ಟು ಎರಡು ಕಾಡಾನೆಗಳನ್ನು ಸೆರೆ ಹಿಡಿದು ಸಕ್ರೆಬೈಲು ಆನೆ ಶಿಬಿರಕ್ಕೆ ಸ್ಥಳಾಂತರಿಸಲಾಗಿದೆ ಈ ಕಾರ್ಯಾಚರಣೆಗೆ ನಾಲ್ಕು ಕುಮ್ಕಿ ಆನೆಗಳನ್ನು ಬಳಸಿಕೊಳ್ಳಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

**<><*<><>*><>**

ಕೃಷ್ಣರಾಜ ಸಾಗರ ಜಲಾಶಯಕ್ಕೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಟಿಪ್ಪು ಸುಲ್ತಾನ್ ಸಾಗರ ಎಂದು ಹೆಸರಿಡಲು ಹುನ್ನಾರ ನಡೆಸಿದ್ದು, ಇದಕ್ಕೆ ಪೀಠಿಕೆಯಾಗಿ ಸಚಿವ ಎಚ್.ಸಿ.ಮಹದೇವಪ್ಪ ಡ್ಯಾಂ ನಿರ್ಮಾಣಕ್ಕೆ ಟಿಪ್ಪು ಸುಲ್ತಾನ್ ಅಡಿಗಲ್ಲು ಹಾಕಿದ್ದರು ಎಂದು ಹೇಳಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಂಡ್ಯದಲ್ಲಿ ಇಂದು ಆರೋಪಿಸಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮದ್ರಾಸ್ ಸರ್ಕಾರದ ಒಪ್ಪಿಗೆ ಪಡೆದು ಡ್ಯಾಂ ನಿರ್ಮಾಣ ಮಾಡಲು ಮುಂದಾದರು. ಮದ್ರಾಸ್ ಸರ್ಕಾರ ಕೇವಲ ೮೦ ಅಡಿಗೆ ಮಾತ್ರ ಅನುಮತಿ ನೀಡಿತ್ತು. ಆದರೆ ಮಹಾರಾಜರು ಸ್ವಂತ ವಿವೇಚನೆ ಬಳಸಿ ೧೨೪ ಅಡಿ ಎತ್ತರದ ಡ್ಯಾಂ ನಿರ್ಮಾಣ ಮಾಡಿದರು. ೨ ಕೋಟಿ ೨೫ ಲಕ್ಷ ರೂಪಾಯಿ ವೆಚ್ಚದಲ್ಲಿ ಪ್ರಾರಂಭಿಕವಾಗಿ ನಿರ್ಮಾಣ ಮಾಡಲು ಹೊರಟಾಗ ಹಣಕಾಸು ಸಮಸ್ಯೆಯಿಂದ ಅರಮನೆಯಲ್ಲಿದ್ದ ತಮ್ಮ ಕುಟುಂಬದವರ ಒಡವೆಗಳನ್ನು ಬಾಂಬೆಯಲ್ಲಿ ಮಾರಾಟ ಮಾಡಿ ಡ್ಯಾಂ ಕಟ್ಟಿದ್ದು, ಎಲ್ಲರಿಗೂ ಗೊತ್ತಿರುವ ಇತಿಹಾಸ ಎಂದು ತಿಳಿಸಿದರು.

**ಬೈಟ್- ಆರ್.ಅಶೋಕ್, ವಿಪಕ್ಷ ನಾಯಕ**

**<><*<><>*><>**

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ  ಫ್ಯಾಷನ್ ಮತ್ತು ಉಡುಪು ವಿನ್ಯಾಸ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ "ವಿನ್ಯಾಸ ವೈಭವ-೨" ಫ್ಯಾಷನ್ ಶೋ ನೆರೆದಿದ್ದ ಪ್ರೇಕ್ಷಕರ ಮನಸೂರೆಗೊಂಡು ಮೆಚ್ಚುಗೆಗೆ ಪಾತ್ರವಾಯಿತು. ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನ ಜ್ಯೋತಿ ಸಭಾಂಗಣದಲ್ಲಿ ಒಟ್ಟು ೧೨ ತಂಡಗಳ ೬೪ ವಿದ್ಯಾರ್ಥಿಗಳು ವಿವಿಧ ಪರಿಕಲ್ಪನೆಗಳನ್ನು ಆಧರಿಸಿದ ವರ್ಣರಂಜಿತ ಉಡುಪು ವಿನ್ಯಾಸ ಪ್ರದರ್ಶಿಸುತ್ತಾ ಆಕರ್ಷಕ ಹಾವಭಾವಗಳ ಬಿಂಕದ ನಡಿಗೆಯ ಮೂಲಕ ಸಭಿಕರನ್ನು ಬೆರಗುಗೊಳಿಸಿದರು.

**<><*<><>*><>**

ಅಲ್ಪಸಂಖ್ಯಾತರ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಸಾಧಿಸಲು ವಿವಿಧ ಇಲಾಖೆಗಳಲ್ಲಿ ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ ೧೫ ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು  ಮಾತನಾಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**